ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಐ.ಟಿ.ಐ ಕಾಲೇಜುಗಳಲ್ಲಿ ಕೊರತೆ ಇರುವ ಶಿಕ್ಷಕರ ಹುದ್ದೆಗಳ ಕುರಿತು

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

540(652) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೇ:-

(ಅ) ರಾಜ್ಯದ ಐ.ಟಿ.ಐ ಕಾಲೇಜುಗಳಲ್ಲಿ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಕಾಲೇಜುವಾರು ಮಂಜೂರಾದ ಶಿಕ್ಷಕರ ಸಂಖ್ಯೆ, ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ, ಕೊರತೆಯಿರುವ ಶಿಕ್ಷಕರ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) ರಾಜ್ಯದ ಎಷ್ಟು ಐ.ಟಿ.ಐ ಕಾಲೇಜುಗಳಿಗೆ ಪ್ರಭಾರಿ ಪ್ರಾಂಶುಪಾಲರನ್ನು ನೇಮಿಸಲಾಗಿದೆ; ಇದರಿಂದ ಆಡಳಿತಾತ್ಮಕ ತೊಂದರೆ ಆಗುವುದಿಲ್ಲವೇ; ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಐ.ಟಿ.ಐ ಕಾಲೇಜುಗಳಲ್ಲಿ ಕೊರತೆ ಇರುವ ಶಿಕ್ಷಕರು ಮತ್ತು ಇತರೆ ಸಿಬ್ಬಂದಿಗಳ ನೇಮಕಾತಿಗಾಗಿ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?